# All India Radio: Bangalore
# National Bulletins In Kannada
# 14.05.2025 / 7.35 am

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**<><*<><>*><>**

<u>ಮುಖ್ಯಾಂಶಗಳು</u>

- ಅಪರಾಧಿಗಳ ಬೆರಳಚ್ಚು ದತ್ತಾಂಶವನ್ನು ರಾಷ್ಟ್ರೀಯ ಜಾಲದಡಿ ದಾಖಲಿಸಬೇಕು- ಕೇಂದ್ರ ಸಚಿವ ಅಮಿತ್ ಶಾ
- ಕಲ್ಲಿದ್ದಲು ಆಮದು ಪ್ರಮಾಣ ಶೇಕಡ ೯.೨ ರಷ್ಟು ಖಡಿತ; ೬.೯೩ ಶತಕೋಟಿ ಡಾಲರ್ ವಿದೇಶಿ ವಿನಿಮಯ ಉಳಿತಾಯ
- ಹನ್ನೊಂದು ವರ್ಷಗಳಲ್ಲಿ ರಕ್ಷಣಾ ಬಜೆಟ್ ೨.೫೩ ಲಕ್ಷಕೋಟಿಯಿಂದ ೬.೮೧ ಲಕ್ಷಕೋಟಿ ರೂಪಾಯಿಗೆ ಏರಿಕೆ
- ಇಂದಿನಿಂದ ಥೈಲೆಂಡ್ ಓಪನ್ ಬ್ಯಾಡ್ಮಿಂಟನ್ ಟೂರ್ನಿ; ಲಕ್ಷ್ಯಸೇನ್, ಮಾಳವಿಕ ಬನ್ಸೋಡ್, ಗಾಯತ್ರಿ ಗೋಪಿಚಂದ್ ಅಭಿಯಾನ ಆರಂಭ

**<><*<><>*><>**

ಕೇಂದ್ರ ಗೃಹ ಸಚಿವ ಅಮಿತ್ ಶಾ ಪುದುಚೇರಿಯಲ್ಲಿ ನಿನ್ನೆ ಮೂರು ಹೊಸ ಕ್ರಿಮಿನಲ್ ಕಾನೂನುಗಳ ಅನುಷ್ಠಾನವನ್ನು ಪರಿಶೀಲಿಸಿದರು. ಪೊಲೀಸ್, ಕಾರಾಗೃಹಗಳು, ನ್ಯಾಯಾಲಯಗಳು, ಪ್ರಾಸಿಕ್ಯೂಷನ್ ಮತ್ತು ವಿಧಿವಿಜ್ಞಾನ ಸೇವೆಗಳಿಗೆ ಸಂಬಂಧಿಸಿದ ಪ್ರಮುಖ ನಿಬಂಧನೆಗಳ ಪ್ರಗತಿ ಮತ್ತು ಪ್ರಸ್ತುತ ಸ್ಥಿತಿಯ ಕುರಿತು ಚರ್ಚಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅಮಿತ್ ಶಾ, ಹೊಸ ಕ್ರಿಮಿನಲ್ ಕಾನೂನುಗಳ ಅನುಷ್ಠಾನದ ಬಗ್ಗೆ ಕೇಂದ್ರಾಡಳಿತ ಪ್ರದೇಶವನ್ನು ಶ್ಲಾಘಿಸಿದರು ಮತ್ತು ಅವುಗಳ ಆರಂಭಿಕ ಅನುಷ್ಠಾನವನ್ನು ಖಚಿತಪಡಿಸಿಕೊಳ್ಳಲು ಒತ್ತು ನೀಡಬೇಕು ಎಂದರು. ತಮಿಳು ಭಾಷೆಯಲ್ಲಿ ಮಾತ್ರ ಎಫ್ಐಆರ್ ನೋಂದಾಯಿಸಬೇಕು ಮತ್ತು ಅಗತ್ಯವಿರುವವರಿಗೆ ಇತರ ಭಾಷೆಗಳಲ್ಲಿ ಲಭ್ಯತೆಯನ್ನು ಖಚಿತಪಡಿಸಿಕೊಳ್ಳಬೇಕು ಎಂದು ಅವರು ಕರೆ ನೀಡಿದರು. ಎಲ್ಲಾ ಬಂಧಿತ ಅಪರಾಧಿಗಳ ಬೆರಳಚ್ಚುಗಳನ್ನು ರಾಷ್ಟ್ರೀಯ ಸ್ವಯಂಚಾಲಿತ ಬೆರಳಚ್ಚು ಗುರುತಿನ ವ್ಯವಸ್ಥೆಯ ಅಡಿಯಲ್ಲಿ ದಾಖಲಿಸಬೇಕು. ಇದರಿಂದ ದತ್ತಾಂಶವನ್ನು ಅತ್ಯುತ್ತಮವಾಗಿ ಬಳಸಬಹುದು. ಯಾವುದೇ ಪ್ರಕರಣದಲ್ಲಿ ಕಾನೂನು ಸಲಹೆ ನೀಡುವ ಹಕ್ಕು ಪ್ರಾಸಿಕ್ಯೂಷನ್ ನಿರ್ದೇಶಕರಿಗೆ ಮಾತ್ರ ಇರಬೇಕು ಎಂದು ಅವರು ಹೇಳಿದರು.

**<><*<><>*><>**

ಏಪ್ರಿಲ್ ೨೦೨೪ ರಿಂದ ಫೆಬ್ರವರಿ ೨೦೨೫ ರವರೆಗಿನ ಅವಧಿಯಲ್ಲಿ ಕಲ್ಲಿದ್ದಲು ಆಮದು ಹಿಂದಿನ ಹಣಕಾಸು ವರ್ಷದ ಇದೇ ಅವಧಿಗೆ ಹೋಲಿಸಿದರೆ ಶೇಕಡ ೯.೨ ರಷ್ಟು ಕಡಿಮೆಯಾಗಿದೆ. ಈ ಅವಧಿಯಲ್ಲಿ ದೇಶದಲ್ಲಿ ಕಲ್ಲಿದ್ದಲು ಆಮದು ಒಟ್ಟು ೨೨೦ ದಶಲಕ್ಷ ಟನ್‌ಗಳಿಗಿಂತ ಹೆಚ್ಚಾಗಿದ್ದು, ಹಿಂದಿನ ಹಣಕಾಸು ವರ್ಷದ ಇದೇ ಅವಧಿಯಲ್ಲಿ ಸುಮಾರು ೨೪೨ ದಶಲಕ್ಷ ಟನ್‌ಗಳಷ್ಟಿತ್ತು ಎಂದು ಕಲ್ಲಿದ್ದಲು ಸಚಿವಾಲಯ ತಿಳಿಸಿದೆ. ಈ ಕಡಿತವು ಸುಮಾರು ೬.೯೩ ಶತಕೋಟಿ ಡಾಲರ್‌ಗಳ ವಿದೇಶಿ ವಿನಿಮಯ ಉಳಿತಾಯಕ್ಕೆ ಕಾರಣವಾಗಿದೆ ಎಂದು ಸಚಿವಾಲಯ ತಿಳಿಸಿದೆ.

ಕಲ್ಲಿದ್ದಲು ಆಧಾರಿತ ವಿದ್ಯುತ್ ಉತ್ಪಾದನೆಯು ಹಿಂದಿನ ವರ್ಷಕ್ಕೆ ಹೋಲಿಸಿದರೆ ಏಪ್ರಿಲ್ ೨೦೨೪ ರಿಂದ ಫೆಬ್ರುವರಿ ೨೦೨೫ ರವರೆಗೆ ಶೇಕಡ ೨.೮೭ ರಷ್ಟು ಪ್ರಗತಿಯಾಗಿದ್ದರೂ ಉಷ್ಣ ವಿದ್ಯುತ್ ಸ್ಥಾವರಗಳಿಂದ ಮಿಶ್ರಣಕ್ಕಾಗಿ ಆಮದು ಶೇಕಡ ೩೮.೮ ರಷ್ಟು ತೀವ್ರವಾಗಿ ಕಡಿಮೆಯಾಗಿದೆ ಎಂದು ಸಚಿವಾಲಯ ಹೇಳಿದೆ.

<><*<><>*><>

೨೦೧೩-೧೪ರಲ್ಲಿ ೨.೫೩ ಲಕ್ಷ ಕೋಟಿ ರೂಪಾಯಿಗಳಿದ್ದ ರಕ್ಷಣಾ ಬಜೆಟ್, ೨೦೨೫-೨೬ರಲ್ಲಿ ೬.೮೧ ಲಕ್ಷ ಕೋಟಿ ರೂಪಾಯಿಗಳಿಗೆ ಏರಿಕೆಯಾಗಿದೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ. ಕಾರ್ಯತಂತ್ರದ ಸುಧಾರಣೆಗಳು, ಖಾಸಗಿ ವಲಯದ ಭಾಗವಹಿಸುವಿಕೆ ಮತ್ತು ನಾವೀನ್ಯತೆಗಳು ಸ್ಥಳೀಯ ಉತ್ಪಾದನೆಯನ್ನು ಹೆಚ್ಚಿಸಿ, ಭಾರತವನ್ನು ಸ್ವಾವಲಂಬಿ, ಜಾಗತಿಕ ವಿಶ್ವಾಸಾರ್ಹ ರಕ್ಷಣಾ ರಫ್ತುದಾರನನ್ನಾಗಿ ಮಾಡಿದೆ ಹಾಗೂ ರಾಷ್ಟ್ರೀಯ ಭದ್ರತೆ ಮತ್ತು ಆರ್ಥಿಕ ಬೆಳವಣಿಗೆಯನ್ನು ಬಲಪಡಿಸಿದೆ ಎಂದು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ರಕ್ಷಣಾ ಸಚಿವಾಲಯ ತಿಳಿಸಿದೆ.

<><*<><>*><>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ನಿನ್ನೆ ಪಂಜಾಬ್‌ನ ಆದಂಪುರ ವಾಯುನೆಲೆಗೆ ಭೇಟಿ ನೀಡಿ ವಾಯುಸೇನೆಯ ಯೋಧರು, ಸೇನಾಧಿಕಾರಿಗಳನ್ನು ಅಭಿನಂದಿಸಿ ಬೆನ್ನು ತಟ್ಟಿರುವುದು ಆಪರೇಷನ್ 'ಸಿಂಧೂರ' ಕಾರ್ಯಾಚರಣೆಯಲ್ಲಿ ದೇಶದ ಸೈನಿಕರ ಆತ್ಮಸ್ಥೈರ್ಯವನ್ನು ಇಮ್ಮಡಿಗೊಳಿಸುವ ಜತೆಗೆ ಪಾಕಿಸ್ತಾನಕ್ಕೂ ದೊಡ್ಡ ಎಚ್ಚರಿಕೆ ಸಂದೇಶ ರವಾನಿಸಿದ್ದಾರೆ ಎಂದು ದಕ್ಷಿಣ ಕನ್ನಡ ಸಂಸದ ಕ್ಯಾಪ್ಟನ್ ಬ್ರಿಜೇಶ್ ಚೌಟ ಹೇಳಿದ್ದಾರೆ. ಪ್ರಧಾನಮಂತ್ರಿ ಮೋದಿ ಅವರು ದೇಶದ ಪ್ರಮುಖ ವಾಯುನೆಲೆಗೆ ಪಾಕಿಸ್ತಾನದ ವಿರುದ್ಧದದ ಸಂಘರ್ಷ ನಡೆಯುತ್ತಿರುವಾಗಲೇ ಭೇಟಿ ನೀಡಿರುವುದು ಗಮನಾರ್ಹ ಬೆಳವಣಿಗೆ. ಒಂದು ರೀತಿಯಲ್ಲಿ ದೇಶದ ನಾಯಕನೇ ಯುದ್ಧಭೂಮಿಯಲ್ಲಿ ಕಾಣಿಸಿಕೊಂಡು ಕಾರ್ಯಾಚರಣೆ ಮುಂಚೂಣಿಯಲ್ಲಿರುವ ನಮ್ಮ ಸೈನಿಕರು, ಸೇನಾಧಿಕಾರಿಗಳಿಗೆ ಮತ್ತಷ್ಟು ಧೈರ್ಯ, ಆತ್ಮಬಲವನ್ನು ತುಂಬಿದ್ದಾರೆ. ಓರ್ವ ಯೋಧನಿಗೆ ಶತ್ರುಗಳನ್ನು ಹಿಮ್ಮೆಟ್ಟಿಸುವ ವೇಳೆ ದೇಶದ ಆಡಳಿತದ ಚುಕ್ಕಾಣಿ ಹಿಡಿದ ನಾಯಕ ಬೆನ್ನುತಟ್ಟಿದಾಗ, ಆತನಿಗೆ ಸಿಗುವ ಹುಮ್ಮಸ್ಸು ಅಷ್ಟಿಷ್ಟಲ್ಲ. ಅದು ಆತನ ಧೈರ್ಯವನ್ನು ಇಮ್ಮಡಿಗೊಳಿಸುತ್ತದೆ, ಕರ್ತವ್ಯ ಪ್ರಜ್ಞೆ ಹೆಚ್ಚಿಸುತ್ತದೆ ಮತ್ತು ದೇಶಕ್ಕಾಗಿ ಇನ್ನಷ್ಟು ತ್ಯಾಗ ಮಾಡಲು ಪ್ರೇರೇಪಿಸುತ್ತದೆ ಎಂಬುವುದನ್ನು ಓರ್ವ ಸೈನಿಕನಾಗಿ ನಾನು ಸ್ಪಷ್ಟವಾಗಿ ಹೇಳಬಲ್ಲೆ ಎಂದು ಕ್ಯಾಪ್ಟನ್ ಬ್ರಿಜೇಶ್ ಅಭಿಪ್ರಾಯಪಟ್ಟಿದ್ದಾರೆ.

<><*<><>*><>

ಜಮ್ಮು ಮತ್ತು ಕಾಶ್ಮೀರ ಕೇಂದ್ರಾಡಳಿತ ಪ್ರದೇಶಕ್ಕೆ ಸಂಬಂಧಿಸಿದ ಯಾವುದೇ ವಿಷಯಗಳ ಬಗ್ಗೆ ಭಾರತವು ದೀರ್ಘಕಾಲದ ರಾಷ್ಟ್ರೀಯ ನಿಲುವನ್ನು ಹೊಂದಿದೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ನವದೆಹಲಿಯಲ್ಲಿ ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿದ ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, ಜಮ್ಮು-ಕಾಶ್ಮೀರಕ್ಕೆ ಸಂಬಂಧಿಸಿದಂತೆ ಭಾರತದ ನೀತಿ ಬದಲಾಗಿಲ್ಲ. ಪಾಕಿಸ್ತಾನವು ಅಕ್ರಮವಾಗಿ ಆಕ್ರಮಿಸಿಕೊಂಡಿರುವ ಭಾರತದ ಪ್ರದೇಶವನ್ನು ಬಿಟ್ಟುಕೊಡುವುದೊಂದೇ ಈಗ ಉಳಿದಿರುವ ವಿಷಯವಾಗಿದೆ. ಈ ಸಮಸ್ಯೆಗಳನ್ನು ಭಾರತ ಮತ್ತು ಪಾಕಿಸ್ತಾನ ದ್ವಿಪಕ್ಷೀಯವಾಗಿ ಪರಿಹರಿಸಬೇಕಾಗುತ್ತದೆ ಎಂದು ಹೇಳಿದರು.

<><*<><>*><>

ಜಸ್ಟೀಸ್ ಭೂಷಣ್ ರಾಮಕೃಷ್ಣ ಗವಾಯಿ ಇಂದು ಭಾರತದ ೫೨ ನೇ ಮುಖ್ಯ ನ್ಯಾಯಮೂರ್ತಿಯಾಗಿ ಪ್ರಮಾಣ ವಚನ ಸ್ವೀಕರಿಸಲಿದ್ದಾರೆ. ರಾಷ್ಟ್ರಪತಿ ಭವನದಲ್ಲಿ ಬೆಳಿಗ್ಗೆ ನಡೆಯುವ ವಿಶೇಷ ಸಮಾರಂಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ನ್ಯಾಯಮೂರ್ತಿ ಗವಾಯಿ ಅವರಿಗೆ ಪ್ರಮಾಣ ವಚನ ಬೋಧಿಸಲಿದ್ದಾರೆ.

<><*<><>*><>

೨೦೦೫ ರಿಂದ ವಿವಿಧ ಚುನಾವಣಾಧಿಕಾರಿಗಳು ಒಂದೇ ರೀತಿಯ ಸರಣಿಯನ್ನು ಬಳಸುತ್ತಿರುವುದರಿಂದ ನೈಜ ಮತದಾರರಿಗೆ ನೀಡಲಾಗುತ್ತಿದ್ದ ಸುಮಾರು ೨೦ ವರ್ಷಗಳ ಹಳೆಯದಾದ ಒಂದೇ ರೀತಿಯ ಚುನಾವಣಾ ಛಾಯಾಚಿತ್ರ ಸಹಿತ ಗುರುತಿನ ಚೀಟಿ- ಎಪಿಕ್ ಸಂಖ್ಯೆಗಳ ಸಮಸ್ಯೆಯನ್ನು ಚುನಾವಣಾ ಆಯೋಗ ಪರಿಹರಿಸಿದೆ. ಅಂತಹ ಎಲ್ಲಾ ಮತದಾರರಿಗೆ ಹೊಸ ಸಂಖ್ಯೆಗಳೊಂದಿಗೆ ಹೊಸ ಭಾವಚಿತ್ರವಿರುವ ಗುರುತಿನ ಚೀಟಿಗಳನ್ನು ವಿತರಿಸಲಾಗಿದೆ. ಮತದಾರರ ಪಟ್ಟಿಯನ್ನು ಲೋಪದೋಷರಹಿತವಾಗಿಸಲು ಮತ್ತು ಅವುಗಳನ್ನು ನವೀಕರಿಸಲು ಕೇಂದ್ರ ಚುನಾವಣಾ ಆಯೋಗ ವ್ಯಾಪಕ ಕ್ರಮಗಳನ್ನು ಕೈಗೊಂಡಿದೆ. ೯೯ ಕೋಟಿಗೂ ಹೆಚ್ಚು ಮತದಾರರ ಸಂಪೂರ್ಣ ಚುನಾವಣಾ ದತ್ತಾಂಶವನ್ನು ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಮುಖ್ಯ ಚುನಾವಣಾ ಅಧಿಕಾರಿಗಳು ಮತ್ತು ದೇಶಾದ್ಯಂತದ ಎಲ್ಲಾ ವಿಧಾನಸಭಾ ಕ್ಷೇತ್ರಗಳು ಮತ್ತು ಮತಗಟ್ಟೆಗಳ ಚುನಾವಣಾ ನೋಂದಣಿ ಅಧಿಕಾರಿಗಳು ಸಂಗ್ರಹಿಸಿದ್ದಾರೆ. ಕ್ಷೇತ್ರ ಮಟ್ಟದ ಪರಿಶೀಲನೆಯ ಸಮಯದಲ್ಲಿ, ಅಂತಹ ರೀತಿಯ ಎಪಿಕ್ ಸಂಖ್ಯೆಗಳನ್ನು ಹೊಂದಿರುವವರು ವಿಭಿನ್ನ ವಿಧಾನಸಭಾ ಕ್ಷೇತ್ರಗಳು ಮತ್ತು ಮತಗಟ್ಟೆಗಳಲ್ಲಿ ನಿಜವಾದ ಮತದಾರರಾಗಿರುವುದು ಕಂಡುಬಂದಿದೆ.

<><*<><>*><>

ಸೆಪ್ಟೆಂಬರ್ ೨೩ ಅನ್ನು ಆಯುರ್ವೇದ ದಿನವೆಂದು ಅಧಿಕೃತವಾಗಿ ಘೋಷಿಸಲಾಗಿದೆ. ಆರೋಗ್ಯ ರಕ್ಷಣೆ ಮತ್ತು ಯೋಗಕ್ಷೇಮದಲ್ಲಿ ಪ್ರಮುಖ ಪಾತ್ರ ವಹಿಸುವ ವೈಜ್ಞಾನಿಕ, ಪುರಾವೆ ಆಧಾರಿತ ಮತ್ತು ಸಮಗ್ರ ಔಷಧ ವ್ಯವಸ್ಥೆಯಾಗಿ ಆಯುರ್ವೇದವನ್ನು ಉತ್ತೇಜಿಸಲು ವಾರ್ಷಿಕವಾಗಿ ಆಯುರ್ವೇದ ದಿನವನ್ನು ಆಚರಿಸಲಾಗುತ್ತಿದೆ ಎಂದು ಆಯುಷ್ ಸಚಿವಾಲಯ ಹೇಳಿದೆ. ಮುಂಬರುವ ದಶಕದಲ್ಲಿ, ಧನ್ತೇರಸ್ ದಿನಾಂಕವು ಅಕ್ಟೋಬರ್ ೧೫ ರಿಂದ ನವೆಂಬರ್ ೧೨ ರವರೆಗೆ ವ್ಯಾಪಕವಾಗಿ ಬದಲಾಗುತ್ತಲೇ ಇರುತ್ತದೆ, ಇದು ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಆಚರಣೆಗಳನ್ನು ಆಯೋಜಿಸಲು ಈ ನಿರ್ದಿಷ್ಟ ದಿನಾಂಕ ಗೊತ್ತುಪಡಿಸಲಾಗಿದೆ.

ನಾಗರಿಕರು, ಆರೋಗ್ಯ ವೃತ್ತಿಪರರು, ಶೈಕ್ಷಣಿಕ ಸಂಸ್ಥೆಗಳು ಮತ್ತು ಅಂತರರಾಷ್ಟ್ರೀಯ ಪಾಲುದಾರರು ಹೊಸದಾಗಿ ನಿಗದಿಪಡಿಸಿದ ದಿನಾಂಕವನ್ನು ಸ್ವೀಕರಿಸಲು ಮತ್ತು ಪ್ರತಿ ವರ್ಷ ಸೆಪ್ಟೆಂಬರ್ ೨೩ ರಂದು ಆಯುರ್ವೇದ ದಿನಾಚರಣೆಯಲ್ಲಿ ಸಕ್ರಿಯವಾಗಿ ಭಾಗವಹಿಸುವಂತೆ ಸಚಿವಾಲಯ ಸೂಚಿಸಿದೆ.

<><*<><>*><>

ನವದೆಹಲಿಯಲ್ಲಿರುವ ಪಾಕಿಸ್ತಾನ ರಾಯಭಾರಿ ಕಚೇರಿಯಲ್ಲಿ ಕೆಲಸ ಮಾಡುತ್ತಿರುವ ಪಾಕಿಸ್ತಾನಿ ಸಿಬ್ಬಂದಿಯೊಬ್ಬರು ಭಾರತದಲ್ಲಿನ ತಮ್ಮ ಅಧಿಕೃತ ಸ್ಥಾನಮಾನಕ್ಕೆ ಹೊಂದಿಕೆಯಾಗದ ಚಟುವಟಿಕೆಗಳಲ್ಲಿ ತೊಡಗಿದ್ದಕ್ಕಾಗಿ ಕೇಂದ್ರ ಸರ್ಕಾರ ಅವರನ್ನು ೨೪ ಗಂಟೆಗಳ ಒಳಗೆ ಭಾರತವನ್ನು ತೊರೆಯುವಂತೆ ಸೂಚಿಸಿದೆ.

ವಿದೇಶಾಂಗ ಸಚಿವಾಲಯ ಈ ವಿಷಯ ತಿಳಿಸಿದ್ದು, ಈ ಕುರಿತು ನಿನ್ನೆ ಆದೇಶ ಹೊರಡಿಸಲಾಗಿದೆ.

**<><*<><>*><>**

ಬ್ಯಾಂಕಾಕ್‌ನಲ್ಲಿ ನಡೆಯಲಿರುವ ಥೈಲ್ಯಾಂಡ್ ಓಪನ್ ಬ್ಯಾಡ್ಮಿಂಟನ್ ಪ್ರಧಾನ ಸುತ್ತಿನಲ್ಲಿ ಭಾರತದ ಅಗ್ರ ಶಟ್ಲರ್‌ಗಳಾದ ಲಕ್ಷ್ಯ ಸೇನ್, ಪ್ರಿಯಾಂಶು ರಾಜಾವತ್, ಉನ್ನತಿ ಹೂಡಾ, ಮಾಳವಿಕಾ ಬನ್ಸೋಡ್ ಮತ್ತು ಮಹಿಳಾ ಡಬಲ್ಸ್ ಜೋಡಿ ಗಾಯತ್ರಿ ಗೋಪಿಚಂದ್ ಮತ್ತು ಟ್ರೀಸಾ ಜಾಲಿ ಇಂದು ತಮ್ಮ ಅಭಿಯಾನವನ್ನು ಪ್ರಾರಂಭಿಸಲಿದ್ದಾರೆ. ಪುರುಷರ ಸಿಂಗಲ್ಸ್‌ನಲ್ಲಿ, ವಿಶ್ವದ ೧೮ ನೇ ಶ್ರೇಯಾಂಕದ ಲಕ್ಷ್ಯ ಸೇನ್ ತಮ್ಮ ಆರಂಭಿಕ ಪಂದ್ಯದಲ್ಲಿ ೩೪ ನೇ ಶ್ರೇಯಾಂಕದ ಐರ್ಲೆಂಡ್‌ನ ನಾತ್ ನ್ಗುಯೆನ್ ಅವರನ್ನು ಎದುರಿಸಲಿದ್ದರೆ, ಪ್ರಿಯಾಂಶು ರಾಜಾವತ್ ಇಂಡೋನೇಷ್ಯಾದ ಅಲ್ವಿ ಫರ್ಹಾನ್ ಅವರ ವಿರುದ್ಧ ಸೆಣಸಲಿದ್ದಾರೆ. ತರುಣ್ ಮನ್ನೆಪಲ್ಲಿ ಮಲೇಷ್ಯಾದ ಜಸ್ಟಿನ್ ಹೋಹ್ ವಿರುದ್ಧ ತಮ್ಮ ಅಭಿಯಾನವನ್ನು ಪ್ರಾರಂಭಿಸಲಿದ್ದಾರೆ. ಮಹಿಳಾ ಸಿಂಗಲ್ಸ್‌ನಲ್ಲಿ, ವಿಶ್ವದ ೨೩ ನೇ ಶ್ರೇಯಾಂಕದ ಮಾಲ್ವಿಕಾ ಬನ್ಸೋಡ್ ಟರ್ಕಿಯ ನೆಸ್ಲಿಹಾನ್ ಅರಿನ್ ವಿರುದ್ಧ ಮತ್ತು ಉನ್ನತಿ ಹೂಡಾ ಥೈಲ್ಯಾಂಡ್‌ನ ಥಮೋನ್ವಾನ್ ನಿಥಿಯಿಟ್ಟಿಕ್ರೈ ಅವರನ್ನು ಎದುರಿಸಲಿದ್ದಾರೆ. ಮಹಿಳೆಯರ ಡಬಲ್ಸ್‌ನಲ್ಲಿ, ಭಾರತದ ವಿಶ್ವದ ೧೦ ನೇ ಶ್ರೇಯಾಂಕದ ಜೋಡಿ ಗಾಯತ್ರಿ ಗೋಪಿಚಂದ್ ಮತ್ತು ಟ್ರೀಸಾ ಜಾಲಿ, ಮಲೇಷ್ಯಾದ ಕಾರ್ಮೆನ್ ಟಿಂಗ್ ಮತ್ತು ಓಂಗ್ ಕ್ಸಿನ್ ಯೀ ವಿರುದ್ಧ ಆಡಲಿದ್ದಾರೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ <>*><>**